ಕರ್ನಾಟಕ ಸರ್ಕಾರ

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

ಬೆಂಗಳೂರು

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.10/2022 **ದಿನಾಂಕ:** 16.01.2023

**ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಪ್ರಾಂಶುಪಾಲರು (ಯುಜಿ) ಹುದ್ದೆಗಳ ನೇಮಕಾತಿ**

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ ಬಗ್ಗೆ.**

ಕಾಲೇಜು ಶಿಕ್ಷಣ ಇಲಾಖೆಯಲ್ಲಿನ ಪ್ರಾಂಶುಪಾಲರು(ಯುಜಿ) ಹುದ್ದೆಗಳಿಗೆ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು, 2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 21.03.2022ರ ಅನ್ವಯ, ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರು ಗ್ರೇಡ್–1 ಹುದ್ದೆಗಳ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅಧಿಸೂಚನೆ ಸಂಖ್ಯೆ ಇಡಿ–121–ಡಿಸಿಇ–2018 ದಿನಾಂಕ:21.03.2022ರ ಮೂಲಕ ರಾಜ್ಯ ಪತ್ರದಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಪರೀಕ್ಷಾ ಪ್ರಾಧಿಕಾರವನ್ನಾಗಿ ನಿಯೋಜಿಸಲಾಗುತ್ತದೆ. ಅರ್ಹ ಅಭ್ಯರ್ಥಿಗಳಿಂದ ದಿನಾಂಕ 13–12–2022 ರಂದು ಅಧಿಸೂಚನೆ ಹೊರಡಿಸಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಮುಂದುವರೆದು, ದಿನಾಂಕ 16.12.2022 ರಿಂದ 15.01.2023 ವರೆಗೆ ಅರ್ಜಿ ಸಲ್ಲಿಸಲು ಹಾಗೂ ದಿನಾಂಕ 17.01.2023 ವರೆಗೆ ಅರ್ಜಿ ಶುಲ್ಕ ಪಾವತಿಸಲು ಕಾಲಾವಕಾಶ ನೀಡಲಾಗಿತ್ತು. ಆದರೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಿಸುವಂತೆ ಅಭ್ಯರ್ಥಿಗಳಿಂದ ಕೋರಿಕೆ ಸ್ವೀಕೃತವಾಗಿರುವುದರಿಂದ, ಅರ್ಜಿ ಸಲ್ಲಿಸಲು ದಿನಾಂಕ 06.02.2023 ವರೆಗೆ ಹಾಗೂ ಅರ್ಜಿ ಶುಲ್ಕ ಪಾವತಿಸಲು ದಿನಾಂಕ 08.02.2023 ವರೆಗೆ ವಿಸ್ತರಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕವೇ ಅರ್ಜಿಗಳನ್ನು ಸಲ್ಲಿಸಲು ಸೂಚಿಸಿದೆ.

ಆಫ್‌ಲೈನ್ ಅರ್ಜಿಗಳನ್ನು / ಪೆನ್ ಮತ್ತು ಪೇಪರ್ ಉಪಯೋಗಿಸಿ ಸಲ್ಲಿಸುವ ಅರ್ಜಿಪ್ರತಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಿ.

ಸಹಿ/–

(ಎಸ್. ರಮ್ಯ ಭಾ.ಆ.ಸೇ.)

ಕಾರ್ಯನಿರ್ವಾಹಕ ನಿರ್ದೇಶಕರು

---

No. ED/KEA/ADMN/CR- 10/2022 Date: 16.01.2023

**Recruitment for the post of Principal (UG) in the department of collegiate education.**

**Extension of dates for submission of online application**

Karnataka Examinations Authority in Vide notification. dated 13-12-2022 invited applications to counduct Competitive Examination for recritment to the posts of Principal (UG) in Government First Grade Colleges in the state of Karnataka. As per the provisions laid down in "Department Services (Collegiate Education Department) (Recruitment of the posts of principal) (UG) (Special) Rules 2020".

Further, applications are invited from the eligible candidates from 16.12.2022 to 15.01.2023 and last date to pay prescribed fees was 17.01.2023. Some of the candidates approached KEA to extend the date for submission of online application. Therefore, all eligible interested candidates can apply 'online' only up to 06.02.2023 and the last date to pay the prescribed fees is 08.02.2023.

The offline applications / applications in hard copies shall not be accepted.

For more details please visit KEA Website http://kea.kar.nic.in

Sd/-

(S. Ramya IAS)

Executive Director.

ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಬೆಂಗಳೂರು

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–10/2022–23 (ಕೆಕೆ) ದಿನಾಂಕ: 13–12–2022

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–10/2022–23 (ಆರ್‌ಪಿಸಿ) ದಿನಾಂಕ: 13–12–2022

## ಅರ್ಜಿ ಅಹ್ವಾನಿಸಿ ಪ್ರಕಟಣೆ

**ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರು ಗ್ರೇಡ್–1 ಹುದ್ದೆಗಳ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅಧಿಸೂಚನೆ ಸಂಖ್ಯೆ ಇಡಿ–121–ಡಿಸಿಇ–2018 ದಿನಾಂಕ 21.03.2022ರ ಮೂಲಕ ರಾಜ್ಯ ಪತ್ರದಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಪರೀಕ್ಷಾ ಪ್ರಾಧಿಕಾರವನ್ನಾಗಿ ನಿಯೋಜಿಸಲಾಗಿರುತ್ತದೆ. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು, 2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 21.03.2022ರ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ)(ಪ್ರಾಂಶುಪಾಲರು (ಯು.ಜಿ) ಹುದ್ದೆಗಳ ನೇಮಕಾತಿ) (ವಿಶೇಷ)(ತಿದ್ದುಪಡಿ) ನಿಯಮಗಳು 2022 ಅನ್ವಯ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.**

**1. ಹುದ್ದೆಗಳ ವಿವರ**

| ಕ್ರ. ಸಂ. | ಹುದ್ದೆಗಳ ಪದನಾಮ | ಒಟ್ಟು ಹುದ್ದೆಗಳ ಸಂಖ್ಯೆ | |
|---|---|---|---|
| | | ರಾಜ್ಯವ್ಯಾಪಿ ಮಿಕ್ಕುಳಿದ ವೃಂದ | ಕಲ್ಯಾಣ ಕರ್ನಾಟಕ ವೃಂದ |
| 01 | ಪ್ರಾಂಶುಪಾಲರು ಗ್ರೇಡ್–1 (ಯು.ಜಿ) | 265 | 45 |

**ವೃಂದವಾರು ಮತ್ತು ಪ್ರವರ್ಗವಾರು ಹುದ್ದೆಗಳ ವಿವರಗಳನ್ನು ಒಳಗೊಂಡ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 121 ಡಿಸಿಇ 2018 ದಿನಾಂಕ 21.03.2022 ನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ.**

**2) ಪದಾವಧಿ ಮತ್ತು ಪಿಂಚಣಿ ಸೌಲಭ್ಯ : ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು, 2020 ರಲ್ಲಿ ನಿಗದಿಪಡಿಸಿದಂತೆ.**

**3) ಶುಲ್ಕ:** ಅರ್ಜಿ ಸಲ್ಲಿಸಿ ಪೂರ್ಣಗೊಂಡ ನಂತರ ನಿಗದಿತ ಶುಲ್ಕದ ಚಲನ್‌ನ್ನು ಪ್ರಾಧಿಕಾರದ ಅಂತರ್ಜಾಲದಿಂದ ಡೌನ್ಲೋಡ್ ಮಾಡಿ, ಶುಲ್ಕ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ಶುಲ್ಕವನ್ನು ಪಾವತಿಸತಕ್ಕದ್ದು;

| **ಅಭ್ಯರ್ಥಿಗಳು** | **ಶುಲ್ಕ** |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | ರೂ. 5000/– |
| ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ–1 & ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇದೆ. **(ರೂ.2500/– ಪ್ರಕ್ರಿಯೆ ಶುಲ್ಕ ಕಡ್ಡಾಯ)** |

**ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ–1 & ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. (ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು) ಆದರೆ ರೂ.2500/– ಪ್ರಕ್ರಿಯೆ ಶುಲ್ಕವನ್ನು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ–1 & ಅಂಗವಿಕಲ ಅಭ್ಯರ್ಥಿಗಳು ಕಡ್ಡಾಯವಾಗಿ ಪಾವತಿಸಬೇಕು.**

ಸೂಚನೆ: ಶುಲ್ಕವನ್ನು ಕಂಪ್ಯೂಟರೈಸ್ಡ್ ಅಂಚೆ ಕಚೇರಿಗಳಲ್ಲಿ ಮಾತ್ರ ಪಾವತಿಸಬೇಕು.

**4) ಅರ್ಜಿ ಸಲ್ಲಿಸುವ ವಿಧಾನ:**

ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ತೋರಿಸಿರುವ **ಲಿಂಕ್** ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿಮಾಡಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 16.12.2022 |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 15.01.2023 |
| ಇ–ಪೋಸ್ಟ್ ಆಫೀಸ್‌ನಲ್ಲಿ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 17.01.2023 |

5) **ಅರ್ಹತೆ:**

- **ಪ್ರಾಂಶುಪಾಲರು ಗ್ರೇಡ್–1 (ಯು.ಜಿ): ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು, 2020ರ ನಿಯಮ 3 ರಲ್ಲಿ ನಿಗದಿಪಡಿಸಿದಂತೆ.**

6) **ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳು:**

ಪರೀಕ್ಷೆಗಳ ಸ್ಥಳ ಮತ್ತು ದಿನಾಂಕಗಳನ್ನು ಅಧಿಸೂಚಿಸಿದಾಗ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ಅಂತರ್ಜಾಲದಿಂದ ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಸ್ಪರ್ಧಾತ್ಮಕ ಪರೀಕ್ಷೆಯ ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಂತರ ಪ್ರಕಟಿಸಲಾಗುವುದು.

**ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳು**

| POST | Marks | N0. of Questions | Exam Duration | Type of Examination |
|---|---|---|---|---|
| ಪ್ರಾಂಶುಪಾಲರು ಗ್ರೇಡ್–1 (ಯು.ಜಿ) | 100 | 100 | 2 hours | **ವಸ್ತುನಿಷ್ಠ ಬಹು ಆಯ್ಕೆ ಪತ್ರಿಕೆ / Objective Multiple Choice Type** |

- **ಪಠ್ಯಕ್ರಮ: ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು, 2020ರ ನಿಯಮ 8 ರಲ್ಲಿ ನಿಗದಿಪಡಿಸಿದಂತೆ.**

**ಸೂಚನೆ: ಋಣಾತ್ಮಕ ಮೌಲ್ಯಮಾಪನವಿರುವುದಿಲ್ಲ.**

7) **ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ:** **ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) ( ಸ್ನಾತಕ ಶಿಕ್ಷಣ) ( ವಿಶೇಷ) (ತಿದ್ದುಪಡಿ) ನಿಯಮಗಳು 2022 ರ ನಿಯಮ 3ರ ಉಪ ನಿಯಮ (2)ರಲ್ಲಿ ನಿರ್ದಿಷ್ಟಪಡಿಸಲಾದಂತೆ, ಯಾರೇ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆಯನ್ನು ಪಡೆಯದ ಹೊರತು ಆಯ್ಕೆಗೆ ಅರ್ಹರಾಗತಕ್ಕದ್ದಲ್ಲ. ಈ ಪರೀಕ್ಷೆಯು ಗರಿಷ್ಠ 150 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಒಳಗೊಂಡಿರತಕ್ಕದ್ದು. ಅಭ್ಯರ್ಥಿಯು ಈ ಪತ್ರಿಕೆಯಲ್ಲಿ ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಗಳಿಸಬೇಕು. ಈ ಪ್ರಶ್ನೆ ಪತ್ರಿಕೆಯನ್ನು ಎಸ್.ಎಸ್.ಎಲ್.ಸಿ. ಹಂತದಲ್ಲಿನ ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು.**

**ಪರಂತು, ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆ ಅಥವಾ ಎಸ್.ಎಸ್.ಎಲ್.ಸಿ.ಗಿಂತ ಹೆಚ್ಚಿನ ಯಾವುದೇ ಪರೀಕ್ಷೆಯಲ್ಲಿ ಕನ್ನಡವು ಮುಖ್ಯ ಭಾಷೆ ಅಥವಾ ದ್ವಿತೀಯ ಭಾಷೆ ಅಥವಾ ಐಚ್ಛಿಕ ವಿಷಯವಾಗಿದ್ದರೆ (ಆದರೆ ಸಂಯೋಜಿತ ಪತ್ರಿಕೆಯಲ್ಲಿ ಒಂದು ವಿಷಯವಲ್ಲ) ಅಥವಾ ಕನ್ನಡ ಮಾಧ್ಯಮದಲ್ಲಿ ಉತ್ತೀರ್ಣನಾದರೆ, ಅಂತಹ ಅಭ್ಯರ್ಥಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ.**

8) **ಈ ಮೇಲಿನ ಹುದ್ದೆಗಳಿಗೆ ಸಂಬಂಧಿಸಿದಂತೆ ಆಯಾ ಹುದ್ದೆಗಳಿಗೆ ಶೈಕ್ಷಣಿಕ ಅಗತ್ಯ ಅರ್ಹತೆ ವಿವರ, ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿಪಡಿಸಿದ ಪತ್ರಿಕೆಗಳು, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಮತ್ತು ಹುದ್ದೆವಾರು ವಿವರಗಳಿಗೆ ಕೆಇಎ ವೆಬ್ ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ. ಅಭ್ಯರ್ಥಿಗಳು ಕಡ್ಡಾಯವಾಗಿ ನೋಡಿ, ಅರ್ಥೈಸಿಕೊಂಡು ನಂತರ ಅರ್ಜಿ ಸಲ್ಲಿಸಬಹುದಾಗಿದೆ.**

**ಗಮನಿಸಿ:**

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದು ಅಭ್ಯರ್ಥಿಗಳಿಗೆ ಈ ಮೇಲ್ಕಂಡ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

2. ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಕಾಯ್ದೆ, 1978 (1990 ರ ಕರ್ನಾಟಕ ಅಧಿನಿಯಮ 14) ರ ಅಡಿಯಲ್ಲಿ ಮಾಡಲ್ಪಟ್ಟ ಅಥವಾ ಎಂದು ಪರಿಗಣಿಸಲಾದ ಸರ್ಕಾರಿ ನೌಕರರ ಸೇವಾ ಷರತ್ತುಗಳನ್ನು ನಿಯಂತ್ರಿಸುವ ಎಲ್ಲಾ ನಿಯಮಗಳು ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು, 2020ರ ಹುದ್ದೆಗಳ ನೇಮಕಾತಿಯ ನಿಬಂಧನೆಗಳಿಗೆ ಅಸಂಗತವಾಗಿಲ್ಲದ ಮಟ್ಟಿಗೆ, ಈ ನಿಯಮಗಳ ಅಡಿಯಲ್ಲಿ ಪ್ರಾಂಶುಪಾಲರಾಗಿ (ಯುಜಿ) ನೇಮಕಗೊಂಡ ವ್ಯಕ್ತಿಗಳಿಗೆ ನಿಯಮಗಳು ಅನ್ವಯವಾಗುತ್ತವೆ.

ಸಹಿ/–

(ಎಸ್. ರಮ್ಯ ಭಾ.ಆ.ಸೇ.)

ಕಾರ್ಯನಿರ್ವಾಹಕ ನಿರ್ದೇಶಕರು